ಕನ್ನಡಪ್ರಭ

ಗುರುವಾರ 7.05.2026

ಗರಿಷ್ಠ 33°c | ಕನಿಷ್ಠ 22°c

ಸುದ್ದಿ ಸಿಂಚನ

ಸಂವೇದನಾಶೀಲತೆ ಪುನಶ್ಚೇತನ ನಮನ ಕಾರ್ಯಾಗಾರ

ಬೇಲೂರು: ಶ್ರೀ ಶಂಕರ ಮಠ, ತಾಲೂಕು ಬ್ರಾಹ್ಮಣ ಮಹಾಸಭಾ ಹಾಗೂ ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆಯ ''ನಮನ'' ಯೋಜನೆಯಡಿ ಸಂವೇದನಾಶೀಲತೆ ಪುನಶ್ಚೇತನ ನಮನ ಕಾರ್ಯಾಗಾರವನ್ನು ಶೃಂಗೇರಿ ಮಠದಲ್ಲಿ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ತಾಲೂಕು ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಹಾಗೂ ಶೃಂಗೇರಿ ಶಂಕರ ಮಠದ ಧರ್ಮಾಧಿಕಾರಿ ಸಿ ಆರ್‌ವಿಜಯ್ ಕೇಶವ್ ಮಾತನಾಡಿ, ಬೆಂಗಳೂರಿನ ನಿಮಾನ್ಸ್ ಸಂಸ್ಥೆಯ ''ನಮನ'' ಯೋಜನೆಯಡಿ ಆಯೋಜಿಸಿರುವ ಮಾನಸಿಕ ಒತ್ತಡ ನಿರ್ವಹಣಾ ಶಿಬಿರವು ಶ್ಲಾಘನೀಯ ಹೆಜ್ಜೆಯಾಗಿದ್ದು ಇಂದಿನ ವೇಗದ ಜೀವನಶೈಲಿಯಲ್ಲಿ ಮಾನಸಿಕ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ. ನಿಮಾನ್ಸ್ ಆಸ್ಪತ್ರೆಯು ವಿವಿಧ ಎನ್‌ಜಿಒಗಳು ಮತ್ತು ಶಿಕ್ಷಣ ಸಂಸ್ಥೆಗಳೊಂದಿಗೆ ಸಹಯೋಗ ದೊಂದಿಗೆ ಆತ್ಮಹತ್ಯೆ ತಡೆಗಟ್ಟುವಿಕೆ, ಮಾಧ್ಯಮ ಜವಾಬ್ದಾರಿ, ಮತ್ತು ನರರೋಗ ತಪಾಸಣಾ ಕಾರ್ಯಾ ಗಾರಗಳನ್ನು ನಡೆಸುತ್ತಿದ್ದು ಜನರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು. ಪಟ್ಟಣದ ಸರ್ಕಾರಿ ಆಸ್ಪತ್ರೆಯ ವೈದ್ಯ ರಾಜೀವ್ ಮಾತನಾಡಿ , ಶಿಕ್ಷಣ ಕ್ಷೇತ್ರ ದಲ್ಲಿ ದಿನದಿಂದ ದಿನಕ್ಕೆ ಸ್ಪರ್ಧೆ ಹೆಚ್ಚಾಗುತ್ತಿದ್ದು ಶಿಕ್ಷಕರು ಹಾಗೂ ಮಕ್ಕಳ ಮೇಲೆ ಮಾನಸಿಕ ಒತ್ತಡ ಹೆಚ್ಚಾಗುತ್ತಿದೆ ಎಂದರು. ನಿಮಾನ್ಸ್ ಆಸ್ಪತ್ರೆಯ ಸಂಪನ್ಮೂಲ ವ್ಯಕ್ತಿ ಡಾ. ಶ್ರಾವಂತಿ ಮಾತನಾಡಿ, ನಿತ್ಯ ಜೀವನದ ಮಾನಸಿಕ ಒತ್ತಡಗಳಿಂದ ಸಹಜವಾಗಿ ದೇಹದ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತದೆ. ಇತ್ತೀಚೆಗೆ ಜನರಲ್ಲಿ ಸಂವೇದನಾಶೀಲತೆ ಕಡಿಮೆಯಾಗುತ್ತಿದೆ. ಈ ಒತ್ತಡಗಳನ್ನು ಸಕಾರಾತ್ಮಕ ಚಿಂತನೆಗಳಿಂದ ಶಮನಗೊಳಿಸಿಕೊಂಡು ಹೇಗೆ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳ ಬೇಕೆಂಬುದನ್ನು ಈ ಕಾರ್ಯಾಗಾರವು ತಿಳಿಸಿಕೊಡುತ್ತದೆ. ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ದೇವಾಲಯ ಹಾಗೂ ಮಠ ಮಾನ್ಯಗಳ ಅರ್ಚಕರು ಇವರಿಗೆ ಸಹಕಾರಿಯಾಗಿ ಯಾಗಲೆಂದು ಇಂದು ಇಲ್ಲಿ ಕಾರ್ಯ ಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು. ಮಕ್ಕಳ ತಜ್ಞೆ ಜಯಲಕ್ಷ್ಮೀ, ಡಾ. ಮದನ್, ಸಾಗರ್‌ಮನೋಜ್, ಬ್ರಾಹ್ಮಣ ಮಹಾಸಭಾ ಮಾಜಿ ಅಧ್ಯಕ್ಷ ಕೆ ಆರ್ ಮಂಜುನಾಥ್, ವೇಣುಗೋಪಾಲ್, ನಾಗರಾಜ್, ರಮೇಶ ಆನಂಬಿ, ಶ್ರೀ ವಿದ್ಯಾ ಹಾಜರಿದ್ದರು.

ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಹಾಸನ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವತಿಯಿಂದ 66/11ಕೆ.ವಿ ಯಸೂಳುರು ವಿ.ವಿ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕೆಲಸಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ 7ರಂದು ಬೆಳಗ್ಗೆ 10ರಿಂದ ಸಂಜೆ 6ಗಂಟೆಯವರೆಗೆ 66/11ಕೆ.ವಿ ಯಸಳೂರು ವಿ.ವಿ ಕೇಂದ್ರದಿಂದ ಸರಬರಾಜಾಗುವ ಹೊಸೂರು, ಕುಂಬ್ರಳ್ಳಿ, ದೊಡ್ಡಕಲ್ಲೂರು, ಕೆರೋಡಿ ಮತ್ತು ಉಚ್ಚಂಗಿ ಪ್ರದೇಶಗಳ ವಿದ್ಯುತ್ ಸ್ಥಾವರಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕಾರ್ಯ ನಿರ್ವಾಹಕ ಎಂಜಿನಿಯರ್ ತಿಳಿಸಿದ್ದಾರೆ.

ಜಲಾಶಯದ ಮಟ್ಟ

ಹೇಮಾವತಿ 06-05-2026

ಗರಿಷ್ಠ ಮಟ್ಟ	2922 (ಅಡಿಗಳು)
ಇಂದಿನ ಮಟ್ಟ	2895.51 ಅಡಿಗಳು
ಒಳಹರಿವು	38 ಕ್ಯುಸೆಕ್
ಹೊರ ಹರಿವು	550 ಕ್ಯುಸೆಕ್



ಬೇಲೂರಿನ ಶೃಂಗೇರಿ ಮಠದಲ್ಲಿ ಶ್ರೀ ಶಂಕರಮಠ, ತಾಲೂಕು ಬ್ರಾಹ್ಮಣ ಮಹಾಸಭಾ ಹಾಗೂ ಬೆಂಗಳೂರಿನ ನಿಮಾನ್ಸ್ ಸಂಸ್ಥೆಯ 'ನಮನ' ಯೋಜನೆಯಡಿ ಕಾರ್ಯಾಗಾರ ಆಯೋಜಿಸಲಾಗಿತ್ತು. ಮಠದ ಧರ್ಮಾಧಿಕಾರಿ ಸಿ ಆರ್‌ವಿಜಯ್ ಕೇಶವ್, ಇತರರು ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಸಕಲೇಶಪುರ ತಾಲೂಕಿನ ಬಾಳ್ಳುಪೇಟೆ ಸಮೀಪದ ಮೆಣಸಮಕ್ಕಿ ಗ್ರಾಮದಲ್ಲಿ ಶ್ರೀ ನಾಗಲಿಂಗೇಶ್ವರ ಸ್ವಾಮಿ ಹಾಗೂ ಮಾರಿದುರ್ಗಮ್ಮನವರ ದೇವಾಲಯದ ಪುನರ್‌ಪ್ರತಿಷ್ಠಾಪನಾ ಕಾರ್ಯಕ್ರಮವನ್ನು ಜವೇನಹಳ್ಳಿ ವಿರಕ್ತ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ ಹಾಗೂ ಇತರೆ ಗಣ್ಯರು ಉದ್ಘಾಟಿಸಿದರು.

ಯುವನಿಧಿ ಯೋಜನೆ: ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಕಡ್ಡಾಯ

ಹಾಸನ: ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯಲ್ಲಿ ನೋಂದಣಿಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಹೊಂದಿರಬೇಕು. ವೆಬ್‌ಸೈಟ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆಎಂಬುದನ್ನು ಪರಿಶೀಲಿಸಿಕೊಂಡು, ಹಾಗೂ ಪರಿಶೀಲನೆಗೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಮಾತ್ರ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿ ಶೀಘ್ರವಾಗಿ ದೃಢೀಕರಿಸಿಕೊಳ್ಳ ಬಹುದು. ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ತಿಂಗಳು 25ನೇ ದಿನಾಂಕದೊಳಗೆ ಸ್ವಯಂ-ಘೋಷಣೆಯನ್ನು ಮಾಡಿಕೊಳ್ಳಬೇಕಾಗಿದೆ, ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 08172-296374 ಅನ್ನು ಸಂಪರ್ಕಿಸುವಂತೆ ಹಾಸನ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಶೃಂಗೇರಿ ಕ್ಷೇತ್ರ ಅಂಚೆ ಮತಗಳ ತಿದ್ದಲಾಗಿದೆ

ಪಂಚರಾಜ್ಯ ಚುನಾವಣೆ ಫಲಿತಾಂಶ ರಾಜಕೀಯ ಬದಲಾವಣೆ ಅಲ್ಲ | ಸಾಮಾಜಿಕ ಬದಲಾವಣೆ ಸಂಕೇತ: ಕೃಷ್ಣ ಬೈರೇಗೌಡ

• **ಕನ್ನಡಪ್ರಭ ವಾರ್ತೆ** ಹಾಸನ

ಪಂಚರಾಜ್ಯಗಳ ಚುನಾವಣೆ ಫಲಿತಾಂಶ ದೇಶದ ರಾಜಕೀಯ ಬದಲಾವಣೆ ಅಲ್ಲ. ಬದಲಾಗಿ ಅದು ಸಾಮಾಜಿಕ ಬದಲಾವಣೆಯ ಸಂಕೇತವಾಗಿದ್ದು, ಯುವಜನರ ಮನಸ್ಥಿತಿ ಬದಲಾಗುತ್ತಿದೆ ಎಂದು ವ್ಯಾಖ್ಯಾನಿಸಿದ ಕಂದಾಯ ಸಚಿವ ಕೃಷ್ಣ ಬೈರೇಗೌಡರು ಶೃಂಗೇರಿ ಮತಕ್ಷೇತ್ರದ ಅಂಚೆ ಮತಗಳನ್ನು ತಿದ್ದಲಾಗಿದೆ. ಹಾಗಾಗಿ ಅವುಗಳನ್ನು ವಿಧಿವಿಜ್ಞಾನ ಪ್ರಯೋಗಾಲಯದಲ್ಲಿ ಪರಿಶೀಲಿಸುವ ಅಗತ್ಯವಿದೆ ಎಂದು ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಲವು ರಾಜ್ಯಗಳಲ್ಲಿ ಜನರ ನಿರೀಕ್ಷೆಗೂ ಮೀರಿ ಫಲಿತಾಂಶಗಳು ಬಂದಿರುವುದು ಗಮನಾರ್ಹ ಬೆಳವಣಿಗೆ. ಕೇರಳದಲ್ಲಿ ನೇರ ಸ್ಪರ್ಧೆ ಇದ್ದರೂ ಕಾಂಗ್ರೆಸ್‌ಗೆ ನಿರೀಕ್ಷೆಗೂ ಮೀರಿ ಉತ್ತಮ ಫಲಿತಾಂಶ ಸಿಕ್ಕಿರುವುದು ಪಕ್ಷಕ್ಕೆ ಸಮಾಧಾನ ಮತ್ತು ಸಂತೋಷ ತಂದಿದೆ. ತಮಿಳುನಾಡಿನಲ್ಲಿ ಡಿಎಂಕೆ ಮತ್ತೆ ಅಧಿಕಾರಕ್ಕೆ ಬರಬಹುದು ಎಂಬ ನಿರೀಕ್ಷೆ ಇದ್ದರೂ, ಅಲ್ಲಿ ಯುವ ಸಮುದಾಯ ಬದಲಾವಣೆಯನ್ನು ಬಯಸಿರುವುದು ಸ್ಪಷ್ಟವಾಗಿ ಗೋಚರಿಸಿದೆ. ಇದು ಕೇವಲ ರಾಜಕೀಯ ವಿಶ್ಲೇಷಣೆಯ



ಸುದ್ದಿಗಾರರೊಂದಿಗೆ ಮಾತನಾಡಿದ ಕೃಷ್ಣ ಬೈರೇಗೌಡ.

ವಿಷಯವಲ್ಲ, ಸಮಾಜದಲ್ಲಿ ನಡೆಯುತ್ತಿರುವ ಬದಲಾವಣೆಯ ಪ್ರತಿಬಿಂಬವಾಗಿದೆ. ವಿಶೇಷವಾಗಿ ಯುವಕರು ಹೊಸತನದೊಂದಿಗೆ ಹೊಸ ಅಧ್ಯಾಯ ಆರಂಭಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಪಶ್ಚಿಮಬಂಗಾಳದ ಕುರಿತು ಮಾತನಾಡಿದ ಸಚಿವರು, ಬಿಜೆಪಿ ಅಧಿಕಾರಕ್ಕೆ ಬಂದಿರುವುದನ್ನು ಟೀಕಿಸಿದರು. ಅಲ್ಲಿ ಸಿಬಿಐ, ಇಡಿ, ಐಟಿ, ಚುನಾವಣಾ ಆಯೋಗ ಸೇರಿದಂತೆ ವಿವಿಧ ಸಂಸ್ಥೆಗಳ ದುರುಪಯೋಗದಿಂದ ಅಧಿಕಾರಕ್ಕೆ ಬಂದಿದ್ದಾರೆ. ಮಮತಾ ಬ್ಯಾನರ್ಜಿ ಅವರಿಗೆ ಅನ್ಯಾಯವಾಗಿ ಹಿಂಸೆ ನೀಡಲಾಗಿದೆ. ಇದು ನ್ಯಾಯ ಸಮ್ಮತ ಮತ್ತು ಧರ್ಮಯುತ ಮಾರ್ಗದಲ್ಲಿ ಬಂದ ಅಧಿಕಾರವಲ್ಲ. ಆದಾಗ್ಯೂ, ಜನರು ನೀಡಿದ ತೀರ್ಪನ್ನು ಗೌರವಿಸುವುದು ಪ್ರಜಾಪ್ರಭುತ್ವದ ಮೌಲ್ಯ ಎಂದರು.

ಬದಲಾದ ಇಂಕ್ ಪರಿಶೀಲಿಸಿ: ಇದೇ ವೇಳೆ, ಶೃಂಗೇರಿ ಕ್ಷೇತ್ರದ ಮರು ಮತ ಎಣಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಗಂಭೀರ ಆರೋಪಗಳನ್ನು ಮಾಡಿರುವ ಸಚಿವರು, ಪೋಸ್ಟಲ್ ಬ್ಯಾಲೆಟ್‌ಗಳಲ್ಲಿ ಏರುಪೇರಾಗಿದೆ ಎಂದು ಹೇಳಿದರು. ಮೊದಲ ಹಂತದ ಮತ ಎಣಿಕೆಯಲ್ಲಿ ಎಲ್ಲಾ ಪಕ್ಷದ ಏಜೆಂಟ್‌ಗಳು ಒಪ್ಪಿ ಸಹಿ ಹಾಕಿದ ಬ್ಯಾಲೆಟ್‌ಗಳನ್ನು ನಂತರ ಬದಲಾಯಿಸಲಾಗಿದೆ. ಕೆಲ ಓಟುಗಳಿಗೆ ಕೆಳಗೆ ಮತ್ತೊಂದು ಇಂಕ್ ಬಳಸಿ ಬೇರೆ ಅಭ್ಯರ್ಥಿಗಳಿಗೆ ಟಿಕ್ ಗುರುತು ಹಾಕಿ ಅವುಗಳನ್ನು ಅಮಾನ್ಯಗೊಳಿಸಲಾಗಿದೆ, ಎಂದು ದೂರಿದರು. ಈ ಬೆಳವಣಿಗೆಯನ್ನು ''ಸಂಪೂರ್ಣ ಕ್ರಿಮಿನಲ್ ಸಂಚು'' ಎಂದು ವಿವರಿಸಿದ ಅವರು, ಪ್ರಕರಣದ ಸತ್ಯಾಸತ್ಯತೆ ಹೊರಬರಲು ಸಮಗ್ರ ತನಿಖೆ ನಡೆಯಬೇಕು ಎಂದು ಆಗ್ರಹಿಸಿದರು. ಇಂಕ್ ಪರೀಕ್ಷೆಗಾಗಿ ಎಫ್‌ಎಸ್‌ಎಲ್‌ಗೆ ಕಳುಹಿಸಿ, ಮೇಲಿನ ಹಾಗೂ ಕೆಳಗಿನ ಗುರುತು ಒಂದೇನಾ ಎಂಬುದನ್ನು ಪರಿಶೀಲಿಸಬೇಕು. ಚುನಾವಣೆಯಲ್ಲಿ ಮತಗಳ ಕಳ್ಳತನ, ಟ್ಯಾಂಪರಿಂಗ್ ನಡೆದಿರುವ ಶಂಕೆ ಗಂಭೀರವಾಗಿದೆ ಎಂದರು.

ಕೆಲ ಅಧಿಕಾರಿಗಳು ನಿರ್ದಿಷ್ಟ ಅಭ್ಯರ್ಥಿಗೆ ಬಂದ ಮತಗಳನ್ನು ಒಟ್ಟುಗೂಡಿಸಿ, ಅವುಗಳ ಮೇಲೆ ಮತ್ತಷ್ಟು ಗುರುತು ಹಾಕುವ ಮೂಲಕ ಅಮಾನ್ಯಗೊಳಿಸಿರುವ ಸಾಧ್ಯತೆ ಇದೆ ಎಂದು ಅವರು ಸೂಚಿಸಿದರು. ಇದು ಪ್ರಜಾಪ್ರಭುತ್ವದ ಆಶಯಕ್ಕೆ ವಿರುದ್ಧವಾದ ನಡೆ. ವ್ಯವಸ್ಥಿತವಾಗಿ ಚುನಾವಣೆಯನ್ನು ಕಳ್ಳತನ ಮಾಡುವ ಕೆಲಸ ನಡೆದಿದೆ ಎಂಬ ಅನುಮಾನ ನಮಗಿದೆ ಎಂದು ಹೇಳಿದರು. ಈ ಪ್ರಕರಣವನ್ನು ಪೊಲೀಸರು ತಕ್ಷಣ ತನಿಖೆ ನಡೆಸಿ ನಿಜಾಂಶವನ್ನು ಜನತೆಗೆ ತಿಳಿಸಬೇಕು ಎಂದು ಒತ್ತಾಯಿಸಿದ ಸಚಿವರು, ಪ್ರಜಾಪ್ರಭುತ್ವದ ಮೇಲೆ ಜನರ ವಿಶ್ವಾಸ ಉಳಿಯಲು ಇದು ಅತ್ಯಗತ್ಯ ಎಂದರು.

ಇದೇ ವೇಳೆ ಸಂಸದ ಶ್ರೇಯಸ್ ಎಂ. ಪಟೇಲ್, ಶಾಸಕ ಕೆ.ಎಂ. ಶಿವಲಿಂಗೇಗೌಡ, ಗ್ಯಾರಂಟಿ ಯೋಜನೆ ಅಧ್ಯಕ್ಷ ಬನವಾಸೆ ರಂಗಸ್ವಾಮಿ, ಕಾಂಗ್ರೆಸ್ ಮುಖಂಡ ಜೆಸಿಬಿ ಚಂದ್ರಶೇಖರ್ ಇತರರು ಉಪಸ್ಥಿತರಿದ್ದರು.

ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಅರ್ಹರಿಂದ ಆಹ್ವಾನ

ಹಾಸನ: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು



ಹಾಗೂ ಪ್ರವರ್ಗ-1 ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2025- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮೇ.16 ರಂದು ಅಂತಿಮ ದಿನಾಂಕವಾಗಿದ್ದು ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ಪ್ರಭಾವಿ ಶಾಸಕ ರೇವಣ್ಣ ಊರಲ್ಲೇ ರಸ್ತೆಯಲ್ಲಿ ಗುಂಡಿ

ಹೊಳೆನರಸೀಪುರ ಪಟ್ಟಣದ ಪ್ರಮುಖ ರಸ್ತೆಗಳಲ್ಲೇ ದೊಡ್ಡ ದೊಡ್ಡ ಗುಂಡಿಗಳು

• **ಕನ್ನಡಪ್ರಭ ವಾರ್ತೆ** ಹೊಳೆನರಸೀಪುರ

ಪಟ್ಟಣ ಪುರಸಭೆ ಮುಂಭಾಗದ ಮಹಾತ್ಮ ಗಾಂಧಿ ವೃತ್ತದ ಮೂಲಕ ಸುಭಾಷ್ ವೃತ್ತ ಸಾಗಿ ಸಾರ್ವಜನಿಕ ಆಸ್ಪತ್ರೆ ತನಕ ದೊಡ್ಡ ದೊಡ್ಡ ಗುಂಡಿ, ಪುರಸಭೆ ವ್ಯಾಪ್ತಿಯ ಸೂರನಹಳ್ಳಿ ರಸ್ತೆ, ಅರಕಲಗೂಡು ರಸ್ತೆ ಸಂಪೂರ್ಣ ಹಾಳಾಗಿದ್ದು ದ್ವಿಚಕ್ರ ವಾಹನ ಸೇರಿದಂತೆ ಎಲ್ಲಾ ಬಗೆಯ ವಾಹನಗಳ ಹಾಗೂ ಸಾರ್ವಜನಿಕರ ಓಡಾಟಕ್ಕೆ ತೀವ್ರ ತೊಂದರೆ ಆಗುತ್ತಿದೆ.

ಸಮಸ್ಯೆ ಕುರಿತಂತೆ ಕಳೆದ ಒಂದು ವರ್ಷದಲ್ಲಿ ಎರಡು ಮೂರು ಬಾರಿ ಪತ್ರಿಕೆಗಳಲ್ಲಿ ವರದಿ ಮಾಡಿ ಪುರಸಭೆ ಮುಖ್ಯಾಧಿಕಾರಿ, ಹಾಸನ ಜಿಲ್ಲಾಧಿಕಾರಿ, ಲೋಕೋಪಯೋಗಿ ಇಲಾಖೆ ಎಇಇಗೆ ಮಾಹಿತಿ ನೀಡಿದ್ದರೂ, ಯಾವುದೇ ಪ್ರಯೋಜನ ಆಗಿಲ್ಲ. ಪ್ರಭಾವಿ ಶಾಸಕರು, ರಾಜ್ಯದಲ್ಲಿ ಆಡಳಿತ ಪಕ್ಷದ ಸಂಸದರು ಇದ್ದರೂ ಈ ರಸ್ತೆ ಗುಂಡಿಗಳನ್ನು ಮುಚ್ಚಿಸಲು ಸಾಧ್ಯ ಆಗುತ್ತಿಲ್ಲವೇ ಎಂದು ಬೆಂಗಳೂರು, ಮೈಸೂರು, ಮಡಿಕೇರಿ ಸೇರಿದಂತೆ ಇನ್ನಿತರ ಕಡೆಗಳಿಂದ ಈ ಮಾರ್ಗದಲ್ಲಿ ಸಂಚರಿಸುವ ವಾಹನಗಳ ಚಾಲಕರು ಕೇಳುವ ಪ್ರಶ್ನೆಗೆ ಪುರಸಭೆ ಮುಖ್ಯಾಧಿಕಾರಿಯೇ ಉತ್ತರ ನೀಡಬೇಕು. ಶಾಸಕ ರೇವಣ್ಣ ಅವರ ಬಳಿ ಸಮಸ್ಯೆ ಕುರಿತಂತೆ ಗಮನ ಸೆಳೆದಾಗ ಸರ್ಕಾರ ಹಣ ನೀಡುತ್ತಿಲ್ಲ ನಾನೇನು ಮಾಡಲಿ ಎಂದಿದ್ದರು. ಸಂಸದರು ಈ ರಸ್ತೆ ಗುಂಡಿಗಳನ್ನು ಮುಚ್ಚಿಸಲು 4 ಕೋಟಿ ಬಿಡುಗಡೆ ಆಗಿದೆ ಕೆಲಸ ಪ್ರಾರಂಭಿಸಲಾಗುವುದು ಎಂದು ವರ್ಷದ ಹಿಂದೆ ಹೇಳಿದ್ದರು. ಪುರಸಭೆ ಮುಖ್ಯಾಧಿಕಾರಿ ಶಿವಶಂಕರ್ ವರ್ಷಗಳ ಹಿಂದೆ ಟೆಂಡರ್‌ಕರೆದಿದ್ದೇವೆ ಎಂದಿದ್ದರು, ನಂತರ ಯಾರೂ ಟೆಂಡರ್‌ಹಾಕಿಲ್ಲ ಎಂದರು.



ಸುಭಾಷ್ ವೃತ್ತದಲ್ಲಿನ ರಸ್ತೆ ಗುಂಡಿ ಬಿದ್ದು ಸಂಪೂರ್ಣ ಹಾಳಾಗಿರುವ ದೃಶ್ಯ.

ಪುರಸಭೆ ವ್ಯಾಪ್ತಿಯ ಮಂಗಳಾಪುರದಿಂದ ಅರಕಲಗೂಡು ರಸ್ತೆಯ ಕೈಗಾರಿಕಾ ಬಡಾವಣೆವರೆಗೆ ಗುಂಡಿ ಮುಚ್ಚಲು 18 ಲಕ್ಷಕ್ಕೆ ಟೆಂಡರ್ ಆಗಿದೆ. ಇನ್ನು ಒಂದು ವಾರದಲ್ಲಿ ಕೆಲಸ ಪ್ರಾರಂಭವಾಗುತ್ತದೆ ಎಂದು ತಿಂಗಳ ಹಿಂದೆ ಹೇಳಿದ್ದರು ಇನ್ನೂ ಕೆಲಸ ಪ್ರಾರಂಭವಾಗಿಲ್ಲ. ಈ ರಸ್ತೆಯಲ್ಲಿ ಓಡಾಡುವ ವಾಹನಗಳ ಮಾಲೀಕರು ಪುರಸಭೆ ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ. ಪ್ರಭಾವಿ ನಾಯಕರಿದ್ದರೂ ಪಟ್ಟಣದ ಪ್ರಮುಖ ರಸ್ತೆಗಳ ಗುಂಡಿ ಮುಚ್ಚಿಸಲು ಸಾಧ್ಯವಾಗುತ್ತಿಲ್ಲ ಎಂದು ಬಿಜೆಪಿ ಮುಖಂಡರು ವ್ಯಂಗ್ಯವಾಡುತ್ತಿದ್ದಾರೆ.

ಬಿಜೆಪಿ ಗೆಲುವಿಗೆ ಸಕಲೇಶಪುರದಲ್ಲಿ ಸಂಭ್ರಮ

ಪಂಜು ಹಿಡಿದು ಬಂಗಾಳದಲ್ಲಿ ಬಲಿದಾನಗೈದ ಹಿಂದೂಗಳ ಸ್ಮರಣೆ

• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ಪಶ್ಚಿಮ ಬಂಗಾಳ ಸೇರಿದಂತೆ ಅಸ್ಸಾಂ, ಪುದುಚೇರಿ ರಾಜ್ಯಗಳಲ್ಲಿ ಬಿಜೆಪಿ ಪಕ್ಷದ ಗೆಲುವನ್ನು ಹಿಂದುತ್ವದ ಗೆಲುವೆಂದು ಪಟಾಕಿ ಸಿಡಿಸಿ, ಪಂಜು ಹಿಡಿದು, ಸಿಹಿ ಹಂಚಿ ಹಿಂದೂ ಹಿತರಕ್ಷಣಾ ವೇದಿಕೆಯ ಕಾರ್ಯಕರ್ತರು ಪಟ್ಟಣದಲ್ಲಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿಂದೂ ಮುಖಂಡ ರಘು, ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಅವರನ್ನು ಸೋಲಿಸಲು ಅನೇಕ ಬಡ ಹಿಂದೂ ಕುಟುಂಬಗಳು ಮಾನ, ಪ್ರಾಣ ತ್ಯಾಗ ಮಾಡಿ ಬಲಿದಾನವಾಗಿವೆ. ಅಂಥ ತ್ಯಾಗಜೀವಿಗಳ ಪರಿಶ್ರಮದಿಂದ ಅಭೂತಪೂರ್ವ ಗೆಲುವು ಸಾಧಿಸಲಾಗಿದೆ ಎಂದು ತಿಳಿಸಿದರು. ಚುನಾವಣೆ ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಸಂಜೆ 6:30ಕ್ಕೆ ಸಕಲೇಶಪುರ



ನಗರದ ಹಳೆಯ ಬಸ್ ನಿಲ್ದಾಣದ ಮುಂಭಾಗದಲ್ಲಿ ಜಮಾವಣೆಗೊಂಡ ಹಿಂದೂ ಹಿತರಕ್ಷಣಾ ವೇದಿಕೆಯ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ಈ ವೇಳೆ ಪಂಜು ಹಿಡಿದು ಪಶ್ಚಿಮ ಬಂಗಾಳದಲ್ಲಿ ಬಲಿದಾನಗೈದ ಹಿಂದೂಗಳನ್ನು ಸ್ಮರಿಸಿದರು. ಸಾರ್ವಜನಿಕರಿಗೆ ಸಿಹಿ ಹಂಚಿ, ವಿಶೇಷವಾಗಿ ಪಶ್ಚಿಮ ಬಂಗಾಳದ ಹಿಂದೂಗಳಿಗೆ ಧನ್ಯವಾದ ಸಲ್ಲಿಸಿದರು. ಹಿಂದೂ ಹಿತರಕ್ಷಣಾ ವೇದಿಕೆಯ ಮಂಜುನಾಥ್ ಕಬ್ಬಿನಗದ್ದೆ, ಕೌಶಿಕ್ ಎಚ್.ಎಂ, ಶಿವು ಜೆಪ್ಪಿ, ಶ್ರೀಜಿತ್ ಗೌಡ, ವಿಜಿತ್ ಗೌಡ, ರವಿ ಹೆಬ್ಬಸಾಲೆ, ಶೇಖರ್ ಹರ್ಷ ಇತರರಿದ್ದರು.

ಹಿಂದೂ ಧರ್ಮ ಉಳಿವಿಗೆ ಎಲ್ಲರ ಸಹಕಾರ ಅಗತ್ಯ: ಶ್ರೀ

• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ಜಗತ್ತಿನ ಸಂಸ್ಕೃತಿ, ನಾಗರಿಕತೆ ಹಾಗೂ ಬದುಕುವ ಕಲೆಯನ್ನು ವಿಶ್ವಕ್ಕೆ ಪರಿಚಯಿಸಿದವರು ಭಾರತೀಯರು. ದೇಶ ಉಳಿಯಬೇಕೆಂದರೆ ಹಿಂದೂ ಧರ್ಮ ಉಳಿಯಬೇಕು. ಈ ನಿಟ್ಟಿನಲ್ಲಿ ದೇಶದಾದ್ಯಂತ ಹಿಂದೂ ಧಾರ್ಮಿಕ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಜವೇನಹಳ್ಳಿ ವಿರಕ್ತ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ ಹೇಳಿದರು.

ತಾಲೂಕಿನ ಬಾಳ್ಳುಪೇಟೆ ಸಮೀಪದ ಮೆಣಸಮಕ್ಕಿ ಗ್ರಾಮದಲ್ಲಿ ಶ್ರೀ ನಾಗಲಿಂಗೇಶ್ವರ ಸ್ವಾಮಿ ಹಾಗೂ ಮಾರಿದುರ್ಗಮ್ಮನವರ ದೇಗುಲ ಪುನರ್ ಪ್ರತಿಷ್ಠಾಪನೆ ಕಾರ್ಯ ಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಶಾಸಕ ಸಿಮೆಂಟ್ ಮಂಜು ಮಾತನಾಡಿ, ಹಿಂದೂ ಧರ್ಮವು ಸಂಸ್ಕೃತಿ ಮತ್ತು ಸಂಪ್ರದಾಯ ಗಳ ಪ್ರತೀಕವಾಗಿದೆ. ಪ್ರತಿಯೊಬ್ಬರೂ ಸಂಸ್ಕೃತಿಯೊಂದಿಗೆ ಜೀವನ ನಡೆಸಬೇಕು. ಭಾರತೀಯ ಸಂಸ್ಕೃತಿಯನ್ನು ಇತರ ರಾಷ್ಟ್ರಗಳೂ ಅಳವಡಿಸಿಕೊಳ್ಳುತ್ತಿರುವುದು ಹೆಮ್ಮೆಯ ಸಂಗತಿ. ಪಾಲಕರು ಮಕ್ಕಳಿಗೆ ಬಾಲ್ಯದಿಂದಲೇ ಸಂಸ್ಕೃತಿ ಮತ್ತು ಧಾರ್ಮಿಕ ಮೌಲ್ಯಗಳನ್ನು ಬೋಧಿಸಬೇಕು ಎಂದು ಸಲಹೆ ನೀಡಿದರು. ಹಿಂದೂ ಧರ್ಮದ ಆಚರಣೆಗಳಲ್ಲಿ ವೈಜ್ಞಾನಿಕತೆ ಅಡಗಿದೆ. ದ್ವೇಷ, ಅಸೂಯೆ ತೊರೆದು ಎಲ್ಲರನ್ನು ಸಾಮರಸ್ಯದಿಂದ ಕಾಣುವ ಮನೋಭಾವ ಬೆಳೆಸಿಕೊಳ್ಳಬೇಕು. ಹಿಂದೂ ಧರ್ಮದೊಂದಿಗೆ ಭಾರತ ಭೂಮಿಯಲ್ಲಿ ಜನಿಸಿರುವುದು ನಮ್ಮ ಭಾಗ್ಯ ಎಂದು ಹೇಳಿದರು.

ವಕೀಲ ಛಲವಾದಿ ಡಿ. ಕರಿಯಣ್ಣ ಮಾತನಾಡಿ, ಭಾರತ ಮಾತೆ ತ್ಯಾಗ ಮತ್ತು ಬಲಿದಾನದ ಸಂಕೇತ. ದೇಶದ ಗೌರವವನ್ನು ಕಾಪಾಡುವ ಮನೋಭಾವ ಪ್ರತಿಯೊಬ್ಬರಲ್ಲೂ ಇರಬೇಕು. ಹಿಂದೂ ಧರ್ಮ ಮತ್ತು ಸಂಸ್ಕೃತಿಯನ್ನು ಹಾಳು ಮಾಡುವ ಪ್ರಯತ್ನಗಳಿಗೆ ಅವಕಾಶ ನೀಡದೆ, ಒಗ್ಗಟ್ಟಿನಿಂದ ಎದುರಿಸಬೇಕಾಗಿದೆ ಎಂದು ತಿಳಿಸಿದರು. ಯಡೇಹಳ್ಳಿ ಆರ್. ಮಂಜುನಾಥ್ ಮಾತನಾಡಿದರು.

ಬೇಲೂರಲ್ಲಿ ಪ್ಲಾಸ್ಟಿಕ್ ಚೀಲ ಬಳಕೆ ನಿಯಂತ್ರಣಕ್ಕೆ ಕ್ರಮ: ಉಷಾ ಸತೀಶ್

ಬೇಲೂರಿನಲ್ಲಿ ಪುರಸಭೆ ದಾಳಿ: ನಿಷೇಧಿತ ಪ್ಲಾಸ್ಟಿಕ್ ವಶ



ಬೇಲೂರಿನಲ್ಲಿ ಪ್ಲಾಸ್ಟಿಕ್ ವಿರುದ್ಧ ಪುರಸಭೆ ವತಿಯಿಂದ ಕಠಿಣ ಕಾರ್ಯಾಚರಣೆ ನಡೆಸಿ ಕಳಪೆ ಪ್ಲಾಸ್ಟಿಕ್ ಕವರ್ ವಶ ಪಡಿಸಿಕೊಂಡು ದಂಡ ವಿಧಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಬೇಲೂರು

ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಹಾಗೂ ಸದಸ್ಯರು ಮತ್ತು ಸಿಬ್ಬಂದಿ ವರ್ಗದವರು ಪಟ್ಟಣದ ಪುರಸಭೆ ವ್ಯಾಪ್ತಿಯ ಅಂಗಡಿಗಳ ಮೇಲೆ ದಿಢೀರ್ ದಾಳಿ ನಡೆಸಿ ಪ್ಲಾಸ್ಟಿಕ್ ವಶಪಡಿಸಿಕೊಂಡು ಮಾಲೀಕರಿಗೆ ದಂಡ ವಿಧಿಸಲಾಯಿತು

ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಮಾತನಾಡಿ, ಪಟ್ಟಣವನ್ನು ಸ್ವಚ್ಛ ಹಾಗೂ ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸುವ ನಿಟ್ಟಿನಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ನಗರದಲ್ಲಿ ಪ್ಲಾಸ್ಟಿಕ್ ಬಳಕೆ ನಿಯಂತ್ರಣಕ್ಕೆ ಕ್ರಮಕೈಗೊಳ್ಳಲಾಗಿದ್ದು, ಹೂವಿನ ಅಂಗಡಿಗಳು, ಹೋಟೆಲ್‌ಗಳು ಹಾಗೂ ಕೆಲವು ಸರ್ಕಾರಿ ಅಂಗಡಿಗಳಲ್ಲೂ ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿರುವುದು ಗಮನಕ್ಕೆ ಬಂದಿದೆ. ಇದನ್ನು ತಡೆಗಟ್ಟಲು ದಂಡ ವಿಧಿಸುವ ಕಾರ್ಯ ಆರಂಭವಾಗಿದ್ದು, ಕೇವಲ ಒಂದು ದಿನದಲ್ಲೇ ಸುಮಾರು ₹5,000ದಷ್ಟು ದಂಡ ವಸೂಲಿ ಮಾಡಲಾಗಿದೆ. ಪ್ಲಾಸ್ಟಿಕ್ ಬಳಕೆಯಿಂದ ಪರಿಸರಕ್ಕೆ ಮಾತ್ರವಲ್ಲ, ಹಸು-ಕರುಗಳಂತಹ ಪ್ರಾಣಿಗಳಿಗೂ ಅಪಾಯ ಉಂಟಾಗುತ್ತಿದೆ. ಆದ್ದರಿಂದ ಸಾರ್ವಜನಿಕರು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಿ ಬಟ್ಟೆ ಚೀಲಗಳನ್ನು ಬಳಸಬೇಕು ಎಂದು ಮನವಿ ಮಾಡಿದರು.

ಪುರಸಭೆ ಮುಖ್ಯಾಧಿಕಾರಿ ಬಸವರಾಜು ಶಿಗ್ಗಾಂವಿ ಮಾತನಾಡಿ, ಪಟ್ಟಣದ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಮಾರಾಟಗಾರರು ಹಾಗೂ ಸಾರ್ವಜನಿಕರಿಗೆ ಈ ಹಿಂದೆಯೇ ಪ್ಲಾಸ್ಟಿಕ್ ಬಳಕೆ ನಿಷೇಧದ ಕುರಿತು ತಿಳಿವಳಿಕೆ ನೀಡಲಾಗಿತ್ತು. ಆದರೂ ಪ್ಲಾಸ್ಟಿಕ್ ಬಳಕೆ ಮುಂದುವರಿದ ಹಿನ್ನೆಲೆಯಲ್ಲಿ ಇಂದು ಅಂಗಡಿಗಳ ಮೇಲೆ ದಿಢೀರ್ ದಾಳಿ ನಡೆಸಲಾಗಿದೆ. ದಾಳಿಯ ವೇಳೆ ಸುಮಾರು 30 ಕೆ.ಜಿ. ನಿಷೇಧಿತ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದ್ದು, ಪ್ಲಾಸ್ಟಿಕ್ ಮಾರಾಟ ಮಾಡುತ್ತಿದ್ದವರಿಗೆ ಒಟ್ಟು ಸುಮಾರು ₹5,000 ದಂಡ ವಿಧಿಸಲಾಗಿದೆ ಎಂದರು.

ಸಾರ್ವಜನಿಕರು ಮಾರುಕಟ್ಟೆಗೆ ಬರುವಾಗ ಕಡ್ಡಾಯವಾಗಿ ಬಟ್ಟೆ ಬ್ಯಾಗ್‌ಗಳನ್ನು ತರಬೇಕು. ವ್ಯಾಪಾರಸ್ಥರು ತಮ್ಮ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಿ, ಬಟ್ಟೆ ಬ್ಯಾಗ್‌ಗಳನ್ನೇ ಬಳಸಬೇಕು ಹಾಗೂ ಗ್ರಾಹಕರಿಗೂ ಅದನ್ನೇ ನೀಡಬೇಕು. ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕಾಗಿ ಕೈಗೊಂಡಿರುವ ಈ ಕಾರ್ಯಾಚರಣೆಗೆ ಸಾರ್ವಜನಿಕರು ಸಹಕರಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷೆ ಹಾಗೂ ಸದಸ್ಯೆ ತೀರ್ಥಕುಮಾರಿ ವೆಂಕಟೇಶ್, ಮೀನಾಕ್ಷಿ ವೆಂಕಟೇಶ್, ಜಮಿಲಾ ತೌಫಿಕ್, ಆರೋಗ್ಯ ಅಧಿಕಾರಿ ಲೋಹಿತ್ ಇತರರು ಹಾಜರಿದ್ದರು.

ಒತ್ತಾಯ | ಜಿಲ್ಲಾಡಳಿತಕ್ಕೆ ಲಾರಿ ಮಾಲೀಕರ ಸಂಘದ ಮನವಿ | ರಾಜಘಟ್ಟ ರಸ್ತೆಯ ಬಳಿ ಜಾಗ

ಗೂಡ್ಸ್‌ಶೆಡ್ ಲಾರಿ ನಿಲುಗಡೆ ಜಾಗ ಉಳಿಸಲು ಆಗ್ರಹ

• **ಕನ್ನಡಪ್ರಭ ವಾರ್ತೆ** ಹಾಸನ

ನಗರದ ರಾಜಘಟ್ಟ ರೈಲ್ವೆ ನಿಲ್ದಾಣದ ರಸ್ತೆಯ ಸಮೀಪದ ಗೂಡ್ಸ್ ಶೆಡ್ ಪ್ರದೇಶದಲ್ಲಿ ಕಳೆದ ಎರಡು ಮೂರು ದಶಕಗಳಿಂದ ನಿರಂತರವಾಗಿ ಲಾರಿಗಳನ್ನು ನಿಲ್ಲಿಸಿಕೊಂಡು ಸಾರ್ವಜನಿಕ ಮತ್ತು ಕೃಷಿ ಉತ್ಪನ್ನಗಳ ಸಾಗಾಣಿಕೆ ಕಾರ್ಯಗಳನ್ನು ನಿರ್ವಹಿಸುತ್ತಿರುವ ಜಾಗವನ್ನು ಮುಂದುವರಿಸಲು ಅನುಮತಿ ನೀಡುವಂತೆ ಆಗ್ರಹಿಸಿ ನೂರಾರು ಜನ ಹಾಸನ ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದ ವತಿಯಿಂದ ಮಂಗಳವಾರದಂದು ಅಪರ ಜಿಲ್ಲಾಧಿಕಾರಿ ಜಗದೀಶ್ ಅವರಿಗೆ ಮನವಿ ಸಲ್ಲಿಸಿದರು.

ಇದೇ ವೇಳೆ ಸಂಘದ ಜಿಲ್ಲಾಧ್ಯಕ್ಷ ಕೆ. ಟಿ. ಸುರೇಶ್ ಮತ್ತು ಶೇಕ್ ಅಹಮದ್ ಮಾಧ್ಯಮದೊಂದಿಗೆ ಮಾತನಾಡಿ, ಸುಮಾರು 20ರಿಂದ 30 ವರ್ಷಗಳ ಹಿಂದೆ ಹಿಂದಿನ ಶಾಸಕ ಎಚ್. ಎಸ್. ಪ್ರಕಾಶ್ ಅವರ ಮುತುವರ್ಜಿಯಿಂದ ಅಂದಿನ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ, ರಾಜಘಟ್ಟ ರಸ್ತೆಯ ಬಳಿಯ ಈ ಜಾಗವನ್ನು ಲಾರಿ ನಿಲುಗಡೆಗಾಗಿ ಬಳಸಲು ಅವಕಾಶ ಪಡೆಯಲಾಗಿದೆ. ಅಂದಿನಿಂದಲೂ ಇಂದಿನವರೆಗೆ ಯಾವುದೇ ವ್ಯತ್ಯಯವಿಲ್ಲದೆ ಲಾರಿಗಳನ್ನು ನಿಲ್ಲಿಸಿಕೊಂಡು, ವಿವಿಧ ಅಗತ್ಯ ವಸ್ತುಗಳ



ಗೂಡ್‌ಶೆಡ್ ಲಾರಿ ಮಾಲೀಕರ ಸಂಘದವರು ಅಪರ ಜಿಲ್ಲಾಧಿಕಾರಿ ಜಗದೀಶ್ ಅವರಿಗೆ ಮನವಿ ಸಲ್ಲಿಸಿ ಬೇಡಿಕೆ ಮುಂದಿಟ್ಟರು.

ಸಾಗಾಣಿಕೆಯನ್ನು ನಿರ್ವಹಿಸುತ್ತಿದ್ದಾರೆ. ಈ ಗೂಡ್ಸ್ ಶೆಡ್ ಪ್ರದೇಶವು ಹಾಸನ ನಗರ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಪ್ರಮುಖ ಸರಬರಾಜು ಕೇಂದ್ರವಾಗಿದ್ದು, ಪ್ರತಿದಿನ ರೈತರಿಗೆ ಅಗತ್ಯವಾದ ಗೊಬ್ಬರ, ಆಲೂಗಡ್ಡೆ ಸೇರಿದಂತೆ ಕೃಷಿ ಸಂಬಂಧಿತ ವಸ್ತುಗಳ ಜೊತೆಗೆ, ಜನಸಾಮಾನ್ಯರಿಗೆ ಬೇಕಾಗುವ ಅಕ್ಕಿ, ಸಿಮೆಂಟ್, ಕಟ್ಟಡ ಸಾಮಗ್ರಿಗಳು ಮತ್ತು ಇತರ ದಿನನಿತ್ಯ ಬಳಕೆಯ ವಸ್ತುಗಳನ್ನು ಇಲ್ಲಿಂದಲೇ ಸಾಗಿಸಲಾಗುತ್ತಿದೆ ಎಂದರು. ಇದರಿಂದ ರೈತರು ಹಾಗೂ ವ್ಯಾಪಾರಿಗಳಿಗೆ ಬಹಳಷ್ಟು ಅನುಕೂಲವಾಗುತ್ತಿದ್ದು, ನಗರದಲ್ಲಿನ ಸರಬರಾಜು ವ್ಯವಸ್ಥೆಯೂ ಸುಗಮವಾಗಿದೆ. ಸಂಘವು ಸ್ಪಷ್ಟಪಡಿಸಿರುವಂತೆ, ಈ ಜಾಗದಲ್ಲಿ ಯಾವುದೇ ರೀತಿಯ ಬಾಡಿಗೆ ಅಥವಾ ಹಣ ವಸೂಲಿ ಮಾಡಲಾಗುತ್ತಿಲ್ಲ. ಜೊತೆಗೆ, ಯಾವುದೇ ಶಾಶ್ವತ ಕಟ್ಟಡಗಳನ್ನು ನಿರ್ಮಿಸದೇ, ಕೇವಲ ಲಾರಿ ನಿಲುಗಡೆಗೆ ಮಾತ್ರ ಬಳಸಿಕೊಳ್ಳಲಾಗುತ್ತಿದೆ. ಈ ಮೂಲಕ ಸರ್ಕಾರಿ ನಿಯಮಗಳನ್ನು ಉಲ್ಲಂಘಿಸದೇ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.

ಹಾಸನ ನಗರದಲ್ಲಿ ದೊಡ್ಡ ಪ್ರಮಾಣದ ವಾಹನಗಳಿಗೆ ಸೂಕ್ತವಾದ ಪರ್ಯಾಯ ನಿಲುಗಡೆ ಸ್ಥಳಗಳ ಕೊರತೆ ಇರುವುದರಿಂದ, ರೈಲ್ವೆ ಇಲಾಖೆಯ ಜಾಗದಲ್ಲಿಯೇ ಲಾರಿಗಳನ್ನು ನಿಲ್ಲಿಸಲು ಅನಿವಾರ್ಯತೆ ಉಂಟಾಗಿದೆ. ರೈಲ್ವೆ ಅಧಿಕಾರಿಗಳೂ ಸಹ ಇದಕ್ಕೆ ಸಹಕಾರ ನೀಡುತ್ತಿದ್ದು, ಯಾವುದೇ ಅಡಚಣೆ ಇಲ್ಲದೆ ಲಾರಿಗಳ ಸಂಚಾರ ಮತ್ತು ನಿಲುಗಡೆ ನಡೆಯುತ್ತಿದೆ ಎಂದು ತಿಳಿಸಿದರು.

ಇದೇ ಪ್ರದೇಶದ ಪಕ್ಕದಲ್ಲಿರುವ ಸುಮಾರು 1-06 ಗುಂಟೆ ಸರ್ಕಾರದ ಜಾಗವೂ ಹಲವು ವರ್ಷಗಳಿಂದ ಉಪಯೋಗವಿಲ್ಲದೇ ಖಾಲಿ ಉಳಿದಿದ್ದು, ಆ ಜಾಗವನ್ನು ಸಹ ಲಾರಿ ನಿಲುಗಡೆಗಾಗಿ ಬಳಸಿಕೊಳ್ಳಲಾಗುತ್ತಿದೆ. ಈ ಜಾಗವನ್ನು ಸರಿಯಾದ ರೀತಿಯಲ್ಲಿ ಬಳಸುವುದರಿಂದ ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದೇ, ಸಾರ್ವಜನಿಕ ಉಪಯೋಗಕ್ಕೆ ಬರುವಂತೆ ಮಾಡಿಕೊಂಡಿದ್ದೇವೆ ಎಂದರು. ಆದರೆ ಈಗ ಈ ಜಾಗ ನಮ್ಮದೆಂದು ಹೇಳಿ ಈ ಜಾಗದಿಂದ ಹೋಗುವಂತೆ ನಮ್ಮ ಮೇಲೆ ಒತ್ತಡ ಏರಲಾಗುತ್ತಿದೆ. ಲಾರಿ ನಿಲುಗಡೆಗೆ ಈ ಜಾಗವನ್ನು ನಿರಂತರವಾಗಿ ಬಳಸಲು ಅವಕಾಶ ನೀಡದಿದ್ದರೆ, ಸಾಗಾಣಿಕೆ ವ್ಯವಸ್ಥೆಗೆ ಗಂಭೀರ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ. ಇದರಿಂದ ರೈತರಿಗೆ ಗೊಬ್ಬರ ಹಾಗೂ ಕೃಷಿ ಉತ್ಪನ್ನಗಳ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುವಷ್ಟೇ ಅಲ್ಲದೆ, ನಗರದಲ್ಲಿ ಅಗತ್ಯ ವಸ್ತುಗಳ ಕೊರತೆ ಉಂಟಾಗುವ ಭೀತಿಯೂ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಹೀಗಾಗಿ, ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಹಲವು ವರ್ಷಗಳಿಂದ ಬಳಕೆಯಲ್ಲಿರುವ ಪರಂಪರೆಯನ್ನು ಮುಂದುವರಿಸುವ ನಿಟ್ಟಿನಲ್ಲಿ, ಪ್ರಸ್ತುತ ಬಳಸುತ್ತಿರುವ ಗೂಡ್ಸ್‌ಶೆಡ್ ಮತ್ತು ಪಕ್ಕದ ಸರ್ಕಾರಿ ಜಾಗದಲ್ಲಿಯೇ ಲಾರಿಗಳನ್ನು ನಿಲ್ಲಿಸಲು ಶಾಶ್ವತ ಅಥವಾ ತಾತ್ಕಾಲಿಕ ಅನುಮತಿ ನೀಡಬೇಕು ಎಂದು ಹಾಸನ ಗೂಡ್ಸ್‌ಶೆಡ್ ಲಾರಿ ಮಾಲೀಕರ ಸಂಘವು ಜಿಲ್ಲಾಡಳಿತವನ್ನು ವಿನಂತಿಸಿತು.

ಪ್ರತಿಭಟನೆಯಲ್ಲಿ ಹಾಸನ ಗೂಡ್ಸ್ ಲಾರಿ ಮಾಲೀಕರ ಸಂಘದ ಲೋಕೇಶ್, ಮಂಜುನಾಥ್, ಶೇಖರ್ ಕುಮಾರ್, ಸಂಜಯ್, ಬಲರಾಮ್, ಶಾರುಕ್ ಕುಮಾರ್ ಇತರರು ಉಪಸ್ಥಿತರಿದ್ದರು.

ಸುದ್ದಿ ಸಿಂಚನ

ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನ

ಹಾಸನ: ಮೊರಾರ್ಜಿ ದೇಸಾಯಿ ವಸತಿ ಕಾಲೇಜು/ ಮೌಲಾನಾ ಆಜಾದ್ 2026-27ನೇ ಶೈಕ್ಷಣಿಕ ವರ್ಷದ ಕಾಲೇಜು ಹಾಗೂ ಹಾಸನ ನಗರಕ್ಕೆ ಹೊಸವಾಗಿ ಮಂಜೂರಾಗಿರುವ ಸರ್ಕಾರಿ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜುನಲ್ಲಿ ಖಾಲಿ ಇರುವ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ದೃಡಿಕೃತ ಶೈಕ್ಷಣಿಕ ದಾಖಲಾತಿಗಳೊಂದಿಗೆ ಅರ್ಜಿಯನ್ನು ಮೇ.12 ರೊಳಗೆ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನಾ ಆಜಾದ್ ಭವನ, ಆಕಾಶ ವಾಣಿ ಹಿಂಬಾಗ, ಸಾಲಗಾಮೆ ಮುಖ್ಯ ರಸ್ತೆ, ಹಾಸನ ಇಲ್ಲಿಗೆ ಸಂಜೆ 5.30 ಗಂಟೆಯ ಒಳಗೆ ಸಲ್ಲಿಸಬಹುದು. ಕಾಲೇಜಿನ ಹೆಸರು ಮತ್ತು ವಿಳಾಸ ಹಾಗೂ ಖಾಲಿ ಹುದ್ದೆ ವಿವರ: ಸರ್ಕಾರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು ಗುರು ಮಾರನಹಳ್ಳಿ ಚನ್ನರಾಯಪಟ್ಟಣ ತಾಲೂಕು, ಇಂಗ್ಲಿಷ್ ಲೆಕ್ಕಶಾಸ್ತ್ರ ರಸಾಯನ ಶಾಸ್ತ್ರ ಮತ್ತು ಇತಿಹಾಸ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಹೊಳೆನರಸೀಪುರ, ಅಲ್ಪ ಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ರಂಗಾಪುರ ಕಾವಲು ಅರಸೀಕೆರೆ, ಕನ್ನಡ ಇಂಗ್ಲಿಷ್, ಮೌಲಾನಾ ಆಜಾದ್ ಮಾದರಿ ಕಾಲೇಜು ಅರಳೇಪೇಟೆ ಹಾಸನ, ಕನ್ನಡ ಇಂಗ್ಲಿಷ್, ಮಹಿಳಾ ಪದವಿ ಪೂರ್ವ ಕಾಲೇಜು ಹೊಸಲೈನ್ ರಸ್ತೆ ಹಾಸನ.

ಸಾಧಕ ಮಕ್ಕಳು ಇತರೆ ಮಕ್ಕಳಿಗೆ ಆದರ್ಶಪ್ರಾಯರಾಗಲಿ

'ಹಾಸನದ ಹೆಮ್ಮೆ' ಕಾರ್ಯಕ್ರಮ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಸಲಹೆ | ಸಾಧಕರಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ಹಾಸನ

ಸಾಧನೆ ಮಾಡಿರುವ ಮಕ್ಕಳೆ ಕುಟುಂಬದ ಮುಕುಟ ಮಣಿಗಳಾಗಿದ್ದು, ಅವರು ಉತ್ತಮ ಸಾಧನೆ ಮಾಡುವ ಮೂಲಕ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಇದು ಹಾಸನದ ಹೆಮ್ಮೆ. ಇವರ ಸಾಧನೆ ಇತರರಿಗೆ ಸ್ಪೂರ್ತಿಯಾಗಿದೆ ಎಂದು ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ನಗರದ ಹಾಸನಾಂಬಾ ಕಲಾಭವನದಲ್ಲಿ ಬುಧವಾರ ಆಯೋಜಿಸಿದ್ದ 'ಹಾಸನದ ಹೆಮ್ಮೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಕ್ಕಳ ಪ್ರಯತ್ನ ಮತ್ತು ಪರಿಶ್ರಮದಿಂದ ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ಹಾಸನ ಜಿಲ್ಲೆ ರಾಜ್ಯದಲ್ಲಿ ನಾಲ್ಕನೇ ಸ್ಥಾನ ಪಡೆಯಲು ಸಾಧ್ಯವಾಗಿದೆ. ನಿಮ್ಮೆಲ್ಲರ ಸಾಧನೆ ನಮ್ಮ ಹೃದಯ ತುಂಬಿದೆ ಇದನ್ನು ಸಂಭ್ರಮಿಸುವ ಕ್ಷಣಕ್ಕಾಗಿ ಹಾಸನದ ಹೆಮ್ಮೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಮಕ್ಕಳ ಸಾಧನೆ ತಂದೆ ತಾಯಿಗೆ ಖುಷಿ ತಂದಿದೆ ಜೊತೆಗೆ ಕುಟುಂಬಕ್ಕೆ ಗೌರವ ತಂದಿದೆ, ಇದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಉತ್ತಮ ಸಾಧನೆ ಮಾಡಿರುವ ಮಕ್ಕಳನ್ನು ಅಭಿನಂದಿಸಿ ಪ್ರೋತ್ಸಾಹ ನೀಡುವುದರಿಂದ ಮುಂದಿನ ಸಾಲಿನಲ್ಲಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡಿದಂತಾಗುತ್ತದೆ ಎಂದರು.



ಹಾಸನಾಂಬೆ ಕಲಾಕ್ಷೇತ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್ಎಸ್ಎಲ್ಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಮಕ್ಕಳ ಸಾಧನೆಯಲ್ಲಿ ತಂದೆ ತಾಯಿ ಪಾತ್ರ ಕೂಡ ಇರುತ್ತದೆ ಎಂದು ತಿಳಿಸಿದ ಸಚಿವರು ಮಕ್ಕಳೇ ಸಮಾಜದ, ದೇಶದ ಆಸ್ತಿ ಸಮಾಜದ ಭವಿಷ್ಯ ಉಜ್ವಲವಾಗಬೇಕು ಎಂದ ಅವರು ಭವಿಷ್ಯದಲ್ಲಿ ಕನಸು ನನಸಾಗಲು ಪರಿಶ್ರಮ ಬಹುಮುಖ್ಯ ಎಂದು ತಿಳಿಸಿದರು.

ಜೀವನದಲ್ಲಿ ಏನಾದರೂ ಸಂಪಾದನೆ ಮಾಡಬಹುದು ಸಂಪಾದಿಸಿದ್ದನ್ನು ಕಳೆದುಕೊಳ್ಳಬಹುದು ಆದರೆ ನಾವು ಗಳಿಸಿದ ವಿದ್ಯೆ ಮತ್ತು ಜ್ಞಾನ ಶಾಶ್ವತವಾಗಿ ಕೊನೆಯ ಉಸಿರು ಇರುವವರೆಗೂ ನಿಮ್ಮೊಂದಿಗೆ ಇರುತ್ತದೆ. ವಿದ್ಯೆಯಿಂದ ನಿಮ್ಮ ಕಾಲ ಮೇಲೆ ನಿಂತು ಜೀವನ ನಡೆಸಬಹುದು ಜೊತೆಗೆ ಎಲ್ಲಾ ಸವಾಲುಗಳನ್ನು ಮೆಟ್ಟಿ ನಿಲ್ಲುವ ಶಕ್ತಿ ಇರುತ್ತದೆ ಎಂದು ತಿಳಿಸಿದರು. ಜೀವನದಲ್ಲಿ ಯಶಸ್ಸಿಗೆ ಒಂದೇ ಸೂತ್ರ ಪರಿಶ್ರಮ ಕಷ್ಟಪಟ್ಟವರು ಗುರಿಮುಟ್ಟುತ್ತಾರೆ ಎಂದ ಅವರು ಸೋಲು, ಗೆಲುವಿಗೆ ನಾವೇ ಕಾರಣ ಛಲ ರೂಢಿಸಿಕೊಂಡು ಸಂಕಲ್ಪ ಮಾಡಿದರೆ ಯಶಸ್ಸು ಕಾಣುತ್ತಾರೆ ಎಂದ ಸಚಿವರು ಜೀವನದ ಯಶಸ್ಸಿಗೆ ಕೀಲಿ ಕೈ ಪರಿಶ್ರಮ ಎನ್ನುವುದು ನನ್ನ ಅಭಿಪ್ರಾಯ ಎಂದರು.

ಮೊರಾರ್ಜಿ ದೇಸಾಯಿ ಶಾಲೆ ಹಾಗೂ ಅನುದಾನಿತ ಶಾಲೆಗಳು ಇನ್ನೂ ಉತ್ತಮ ಫಲಿತಾಂಶ ಪಡೆಯಲು ಹೆಚ್ಚು ಒತ್ತು ನೀಡಬೇಕು ಎಂದು ತಿಳಿಸಿದರು.

ಸಂಸದರಾದ ಶ್ರೇಯಸ್ ಎಂ ಪಟೇಲ್ ಅವರು ಮಾತನಾಡಿ ರಾಜ್ಯಕ್ಕೆ ಒಂದು ಅಪ್ರತಿಮವಾದ ಕೊಡುಗೆಯನ್ನು ನಮ್ಮ ಜಿಲ್ಲೆಯ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿಯ ವಿದ್ಯಾರ್ಥಿಗಳು ನೀಡಿದ್ದಾರೆ ಇದು ಹೆಮ್ಮೆಯ ವಿಷಯವಾಗಿದೆ ಎಂದರು. ಶಿಕ್ಷಣದಿಂದ ಮಾತ್ರ ಗುರಿಯನ್ನು ತಲುಪಲು ಸಾಧ್ಯ ಹಾಗೂ ಶಿಕ್ಷಣದಿಂದ ಏನು ಬೇಕಾದರೂ ಸಾಧಿಸಬಹುದು ಎಂಬುದಕ್ಕೆ ಡಾ.ಬಿ.ಆರ್ ಅಂಬೇಡ್ಕರ್ ಅವರನ್ನು ಅನುಸರಿಸುವ ಕೆಲಸವನ್ನು ಮಾಡಬೇಕು ಎಂದು ಹೇಳಿದರು.

ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತನಾಡಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದು ಉತ್ತಮ ಕೆಲಸವಾಗಿದೆ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಮಟ್ಟದಲ್ಲಿ ವಿದ್ಯಾಭ್ಯಾಸವನ್ನು ಮಾಡಿ ಹಾಸನ ಜಿಲ್ಲೆಗೆ ಕೀರ್ತಿಯನ್ನು ಹೆಚ್ಚಿಸಬೇಕು ಮತ್ತು ಯಶಸ್ವಿನ ದಾರಿಯ ಕಡೆ ಸಾಗಬೇಕು ಎಂದರು. ಸರ್ಕಾರಿ ಶಾಲೆ ಕಾಲೇಜುಗಳಲ್ಲಿನ ವಿದ್ಯಾಭ್ಯಾಸ ವ್ಯವಸ್ಥೆಯಲ್ಲಿ ಹೋರಾಟ ಮಾಡುವುದು ಅನಿವಾರ್ಯವಾಗಿದೆ, ಆರ್ಥಿಕವಾಗಿ ಹಿಂದುಳಿದಿರುವ ಮಕ್ಕಳಿಗೆ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ ಮೂಲಭೂತ ಸೌಕರ್ಯ ಕಲ್ಪಿಸುವುದು ಜನಪ್ರತಿನಿಧಿಗಳ ಕರ್ತವ್ಯವಾಗಿದೆ ಎಂದು ಹೇಳಿದರು.

ಶಾಸಕರಾದ ಸ್ವರೂಪ ಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ ಜಿಲ್ಲೆಯು ರಾಜಕೀಯ, ವಿಜ್ಞಾನ, ಶಿಕ್ಷಣ ಹಾಗೂ ಹಲವಾರು ಕ್ಷೇತ್ರದ ತನ್ನದೇ ಆದ ಛಾಪು ಮೂಡಿಸಿದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು ಉತ್ತಮವಾದ ಸಾಧನೆಯನ್ನು ಮಾಡಿ ಜಿಲ್ಲೆಗೆ ಹೆಮ್ಮೆ ತರುವಂತಹ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು. ಶಾಸಕರಾದ ಎಚ್. ಕೆ ಸುರೇಶ್ ಅವರು ಮಾತನಾಡಿ ಎಂದಿಗೂ ಕಳವು ಆಗದೆ ಇರುವ ಒಂದು ವಿಚಾರವೆಂದರೆ ಅದು ವಿದ್ಯೆ ಮಾತ್ರ ಹಾಗೂ ಶಿಕ್ಷಣದಿಂದ ಮಾತ್ರ ಇತಿಹಾಸವನ್ನು ಬರೆಯಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಟೇಲ್ ಶಿವಪ್ಪ, ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಾಬು, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಲರಾಮ್ ಹಾಗೂ ಮತ್ತಿತರರು ಉಪಸ್ಥಿತಿದ್ದರು.

ಸಾಧುಸಂತರನ್ನು ನೋಯಿಸಿದರೆ ವಂಶವೇ ಹಾಳು

ಶಿವಲಿಂಗ ಮಹಾಸ್ವಾಮಿಗಳ ಸ್ಮರಣಾರಾಧನೆಯಲ್ಲಿ ಕೋಡಿ ಮಠ ಶ್ರೀ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

''ಸಾಮಾನ್ಯವಾಗಿ ಬೀದಿಯಲ್ಲಿ ಆನೆ ಸಾಗಿದಾಗ ಶ್ವಾನಗಳು ಬೊಗಳುವುದು ಸ್ವಾಭಾವಿಕ. ಆದರೆ ಅದರಿಂದ ಆನೆಗೆ ಏನು ಹಾನಿ? ಅದೇ ರೀತಿ ಅನಾವಶ್ಯಕ ಟೀಕೆಗಳಿಗೆ ಮಹತ್ವ ನೀಡುವುದಿಲ್ಲ,'' ಎಂದು ಸುಕ್ಷೇತ್ರ ಹಾರನಹಳ್ಳಿ ಕೋಡಿಮಠದ ಪೀಠಾಧ್ಯಕ್ಷರಾದ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ತೀವ್ರವಾಗಿ ಪ್ರತಿಕ್ರಿಯಿಸಿದರು.

ತಾಲೂಕಿನ ಮಾಡಾಳು ಗ್ರಾಮದ ಮೂಲಸ್ಥಾನ ಶ್ರೀ ಸ್ವರ್ಣಗೌರಮ್ಮ ದೇವಾಲಯದ ಆವರಣದಲ್ಲಿ ಆಯೋಜಿಸಿದ್ದ ಶ್ರೀ ಶಿವಲಿಂಗ ಮಹಾಸ್ವಾಮಿಗಳ 139ನೇ ವರ್ಷದ ಸ್ಮರಣಾರಾಧನೆ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಭಕ್ತರಿಗೆ ಆಶೀರ್ವಚನ ನೀಡಿದ ಅವರು, ಸಾಧು-ಸಂತರ ಮನಸ್ಸು ನೋಯಿಸಿದವರ ಜೀವನದಲ್ಲಿ ಶಾಂತಿ ಇರುವುದಿಲ್ಲ. ಅಂತಹ ಪಾಪವು ವಂಶಪಾರಂಪರ್ಯವಾಗಿ ಪರಿಣಾಮ ಬೀರುತ್ತದೆ ಎಂದು ಎಚ್ಚರಿಸಿದರು. ಸಾಧುಸಂತರಿಗೆ, ಮಠಗಳಿಗೆ, ಗುರುಪರಂಪರೆಗೆ ವಿರುದ್ಧವಾಗಿ ನಡೆದುಕೊಳ್ಳುವುದು ಕೇವಲ ವ್ಯಕ್ತಿಯ ಮೇಲಲ್ಲ, ಅವನ ವಂಶದ ಮೇಲೆಯೇ ಪರಿಣಾಮ ಬೀರುತ್ತದೆ. ಗುರುನನ್ನು ಗೌರವಿಸುವ ಮನೋಭಾವವೇ ಮಾನವನನ್ನು ರಕ್ಷಿಸುತ್ತದೆ. 'ಹರ ಮುನಿದರೂ ಗುರು ಕಾಯುವನು' ಎಂಬ ಮಾತಿನ ಅರ್ಥವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಉಪದೇಶಿಸಿದರು. ಕೋಡಿಮಠ ಯಾವುದೇ ಜಾತಿ, ಧರ್ಮ ಅಥವಾ ಪಂಥಕ್ಕೆ ಸೀಮಿತವಾಗಿಲ್ಲ. ಸರ್ವಧರ್ಮ ಸಮಭಾವದ ಸಂದೇಶವನ್ನು ಸಾರುವ ಈ ಮಠ, ಎಲ್ಲ ಭಕ್ತರನ್ನು ಸಮಾನವಾಗಿ ಆಶೀರ್ವದಿಸುತ್ತದೆ ಎಂದು ಹೇಳಿದರು.

ಹಂದಿಗೂಡು ಮಠದ ಶಿವಯೋಗಿ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ''ಬಸವಣ್ಣರು ಅನುಭವ ಮಂಟಪದ ಮೂಲಕ ಸಮಾನತೆಯ ಸಂದೇಶ ಸಾರಿದರೆ, ಇಂದಿನ ಕಾಲದಲ್ಲಿ ಕೋಡಿಮಠದ ಶ್ರೀಗಳು ಅದೇ ತತ್ವವನ್ನು ಜಾತ್ಯತೀತವಾಗಿ ಅನುಷ್ಠಾನಗೊಳಿಸುತ್ತಿದ್ದಾರೆ. ಕೆಲವರು ಮಾತನಾಡಿದರೆ ಕರ್ನಾಟಕ ನೋಡುತ್ತದೆ, ಕೆಲವರು ಮಾತನಾಡಿದರೆ ಭಾರತ ನೋಡುತ್ತದೆ, ಆದರೆ ಕೆಲವರ ಮಾತು ವಿಶ್ವದ ಗಮನ ಸೆಳೆಯುತ್ತದೆ, ಆ ಪಟ್ಟಿಯಲ್ಲಿ ಕೋಡಿಮಠ ಶ್ರೀಗಳೂ ಇದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಸವಣ್ಣನಂತಹ ಮಹನೀಯರನ್ನೇ ಟೀಕಿಸಿದ ಸಮಾಜದಲ್ಲಿ, ಇತರರ ಬಗ್ಗೆ ಮಾತನಾಡುವುದನ್ನು ಬಿಡುವುದಿಲ್ಲ. ಆದರೂ ಧರ್ಮದ ದಾರಿಯಲ್ಲಿ ನಡೆದು ಸಮಾಜಕ್ಕೆ ಮಾರ್ಗದರ್ಶನ ನೀಡುವುದು ನಮ್ಮ ಕರ್ತವ್ಯ ಎಂದರು.



ಮಾಡಾಳು ಗ್ರಾಮದ ಮೂಲಸ್ಥಾನ ಶ್ರೀ ಸ್ವರ್ಣಗೌರಮ್ಮ ದೇಗುಲ ಆವರಣದಲ್ಲಿ ನಡೆದ ಶ್ರೀಗಳ ಸ್ಮರಣಾರಾಧನೆ.

ಮೂಲ ಸ್ವರ್ಣಗೌರಮ್ಮ ದೇವಿಯ ಮಹಿಮೆ ಕುರಿತು ಮಾತನಾಡಿದ ಅವರು, ದೇವಿಯ ಅನುಗ್ರಹದಿಂದ ನಿರ್ಮಾಣವಾಗುತ್ತಿರುವ ಈ ನೂತನ ದೇವಾಲಯ ಭವಿಷ್ಯದಲ್ಲಿ ದೇಶದ 18 ಶಕ್ತಿಪೀಠಗಳಂತೆ 19ನೇ ಶಕ್ತಿಪೀಠವಾಗಿ ಬೆಳೆಯಲಿದೆ. ಸಂಕಷ್ಟದಲ್ಲಿ ಬರುವ ಭಕ್ತರಿಗೆ ಜಗನ್ಮಾತೆ ಸ್ವರ್ಣಗೌರಮ್ಮ ದೇವಿ ಆಶ್ರಯವಾಗುವಳು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮಕ್ಕೂ ಮುನ್ನ ದೇವಾಲಯದ ಆವರಣದಲ್ಲಿ ಭವ್ಯ ಉತ್ಸವ ಜರುಗಿದ್ದು, ಕಳೆದ ಆರು ದಿನಗಳಿಂದ ನಡೆಯುತ್ತಿದ್ದ ಶಿವಲಿಂಗಜ್ಜಯ್ಯ ಅವರ ಪುಣ್ಯ ಪ್ರವಚನಗಳು ಸಮಾಪ್ತಿಗೊಂಡವು. ಸಾವಿರಾರು ಭಕ್ತರು ಭಾಗವಹಿಸಿ ಅನ್ನಸಂತರ್ಪಣೆಯಲ್ಲಿ ಪಾಲ್ಗೊಂಡರು.

ಸಮಾರಂಭದಲ್ಲಿ ಬೊಮ್ಮನಹಳ್ಳಿ ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ, ಮಾಡಾಳು ನಿರಂಜನ ಮಠದ ರುದ್ರಮುನಿ ಸ್ವಾಮೀಜಿ, ಮೂರು ಕಳಶ ಮಠದ ಜ್ಞಾನಪ್ರಭು ಸಿದ್ಧರಾಮ ದೇಶಿಕೇಂದ್ರ ಸ್ವಾಮೀಜಿ, ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರು, ಎಚ್‌ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ರಾಂಪುರ ಶೇಖರಪ್ಪ, ಬಿಜೆಪಿ ಮುಖಂಡ ಜಿ.ವಿ.ಟಿ. ಬಸವರಾಜ್, ಕೆವಿಎನ್ ಶಿವು, ಜೆಡಿಎಸ್ ಮುಖಂಡ ಚಂದ್ರಶೇಖರ್, ತಾಪಂ ಮಾಜಿ ಸದಸ್ಯೆ ಲಕ್ಷ್ಮೀಶ್ರೀಧರ್, ಮೂಲಸ್ಥಾನ ಶ್ರೀ ಗೌರಮ್ಮ ದೇವಿ ಸೇವಾ ಸಮಿತಿ ಅಧ್ಯಕ್ಷ ಎಂ. ಎಸ್ ನಟರಾಜ್, ಗೌರವಾಧ್ಯಕ್ಷ ಎಸ್ ಮಲ್ಲಿಕಾರ್ಜುನಪ್ಪ, ಕೋಡಿಮಠದ ಏಜೆಂಟ್ ಹೆಚ್.ಸಿ ಮಹದೇವಪ್ಪ ಮುಖಂಡರಾದ ಎಂ.ಸಿ ನಟರಾಜ್, ಮಾಡಾಳು ಶಿವಲಿಂಗಪ್ಪ, ಎಂ.ಜಿ ಶಿವಣ್ಣ ದಾಸಪ್ಪ ತಿಮ್ಮಯ್ಯ ಉಪಸ್ಥಿತರಿದ್ದರು.

ಕ್ರೀಡಾಂಗಣ ನಿರ್ಮಾಣಕ್ಕೆ ಗೋಪಾಲಸ್ವಾಮಿ ಒತ್ತಾಯ

ಹೊಯ್ಸಳ ಕ್ರಿಕೆಟರ್ಸ್ ವತಿಯಿಂದ ಪ್ರೀಮಿಯರ್‌ಲೀಗ್ ಸೀಸನ್ 1 ಪಂದ್ಯಾವಳಿಗೆ ಚಾಲನೆ

• **ಕನ್ನಡಪ್ರಭ ವಾರ್ತೆ** ನುಗ್ಗೇಹಳ್ಳಿ

ಹೋಬಳಿ ಕೇಂದ್ರದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಕ್ರೀಡೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮಿನಿ ಕ್ರೀಡಾಂಗಣ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವರನ್ನು ಒತ್ತಾಯಿಸುವುದಾಗಿ ಮಾಜಿ ವಿಧಾನ ಪರಿಷತ್ ಸದಸ್ಯ ಎಂ.ಎ. ಗೋಪಾಲಸ್ವಾಮಿ ತಿಳಿಸಿದರು.

ಹೋಬಳಿ ಕೇಂದ್ರದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಹೊಯ್ಸಳ ಕ್ರಿಕೆಟರ್ಸ್ ವತಿಯಿಂದ ಪ್ರೀಮಿಯರ್ ಲೀಗ್ ಸೀಸನ್ 1 ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದರು. ಹೋಬಳಿ ಕೇಂದ್ರದಲ್ಲಿ ಇದೆ ಮೊದಲ ಬಾರಿಗೆ ಹೊಯ್ಸಳ ಕ್ರಿಕೆಟರ್ಸ್ ವತಿಯಿಂದ ಕ್ರಿಕೆಟ್ ಪಂದ್ಯಾವಳಿ ಆಯೋಜಿಸುವ ಮೂಲಕ ಕ್ರಿಕೆಟ್ ಪಂದ್ಯಾವಳಿಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಇದರ ಜೊತೆಗೆ ಹೋಬಳಿಯ ಮೂಲ ಕ್ರೀಡೆಯಾದ ವಾಲಿಬಾಲ್ ಆಟಕ್ಕೆ ಹೆಚ್ಚಿನ ಪ್ರೋತ್ಸಾಹ ಅಗತ್ಯವಿದೆ ಎಲ್ಲಾ ಕ್ರೀಡೆಗಳಿಗೂ ಅವಕಾಶ ಕಲ್ಪಿಸುವ ಸಲುವಾಗಿ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಮಿನಿ ಕ್ರೀಡಾಂಗಣ ನಿರ್ಮಾಣಕ್ಕೆ ಜಿಲ್ಲಾ ಉಸ್ತುವಾರಿ ಸಚಿವರನ್ನು ಹಾಗೂ ಕ್ರೀಡಾ ಸಚಿವರನ್ನು ಒತ್ತಾಯಿಸುವುದಾಗಿ ತಿಳಿಸಿದರು.



ಪಂದ್ಯಾವಳಿಯನ್ನು ಮಾಜಿ ಎಂಎಲ್‌ಸಿ ಗೋಪಾಲಸ್ವಾಮಿ ಉದ್ಘಾಟಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ 5 ಗ್ಯಾರಂಟಿ ಯೋಜನೆಗಳ ಜೊತೆಗೆ ಪಕ್ಷಾತೀತವಾಗಿ ಎಲ್ಲಾ ಶಾಸಕರ ಕ್ಷೇತ್ರಗಳಿಗೂ ಹೆಚ್ಚಿನ ಅನುದಾನ ನೀಡುತ್ತಿದೆ ತಾಲೂಕಿನಲ್ಲಿ ಏತ ನೀರಾವರಿ ಯೋಜನೆ ಸೇರಿದಂತೆ ರಸ್ತೆ ಕುಡಿಯುವ ನೀರು ಸಮುದಾಯ ಭವನ ಗ್ರಾಮೀಣಾಭಿವೃದ್ಧಿ ಸೇರಿದಂತೆ ಅನೇಕ ಅಭಿವೃದ್ಧಿ ಕೆಲಸಗಳಿಗೆ ಕಳೆದ ಎರಡುವರೆ ವರ್ಷಗಳಲ್ಲಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಿದೆ ನಮಗೆ ರಾಜಕಾರಣದ ಅವಶ್ಯಕತೆ ಇಲ್ಲ ತಾಲೂಕಿನ ಅಭಿವೃದ್ಧಿಯಷ್ಟೇ ಮುಖ್ಯ ಕಳೆದ ಚುನಾವಣೆಯಲ್ಲಿ ಅಲ್ಪ ಮತಗಳಿಂದ ಸೋತಿದ್ದೇನೆ ಸೋಲನ್ನೇ ಸವಾಲಾಗಿ ಸ್ವೀಕರಿಸಿ ಕ್ಷೇತ್ರದ ಜನರ ಕಷ್ಟ ಸುಖಗಳಿಗೆ ಸದಾ ಸ್ಪಂದಿಸುತ್ತಿದ್ದೇನೆ ತಾಲೂಕಿನ ಅಭಿವೃದ್ಧಿಯೇ ನನ್ನ ಗುರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಎನ್ಎಸ್ ಪ್ರಕಾಶ್, ಬಾಣನಕೆರೆ ಅಶೋಕ್, ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರ ಯುವ ಕಾಂಗ್ರೆಸ್ ಅಧ್ಯಕ್ಷ ಅವೇರಹಳ್ಳಿ ವೇಣು, ನಟರಾಜ್ ಯಾದವ್, ಶಿಕ್ಷಕ ನಂಜುಂಡಿ, ಪ್ರದೀಪ್, ಅಚ್ಚು, ಸೇರದಂತೆ ಹೊಯ್ಸಳ ಕ್ರಿಕೆಟರ್ಸ್ ಸದಸ್ಯರು ಹಾಗೂ ಆಟಗಾರರು ಹಾಜರಿದ್ದರು.

ಕಾರು ಸಮೇತ ಮೂವರ ಬಂಧನ

ಹಾಸನ: ಮಂಗಳೂರು ಸಿಐಡಿ ಅರಣ್ಯ ಸಂಚಾರಿ ದಳದ ಪೊಲೀಸರಿಗೆ ದೊರೆತ ಮಾಹಿತಿಯಂತೆ ಮಂಗಳೂರು ಕದ್ರಿ ಉದ್ಯಾನವನದ ಬಳಿಯಲ್ಲಿ ಚಿಪ್ಪು ಹಂದಿಯ ಚಿಪ್ಪುಗಳನ್ನು ಮಾರಾಟಕ್ಕೆ ಯತ್ನಿಸುತ್ತಿದ್ದಾರೆ ಎಂಬುದಾಗಿ ದೊರೆತ ಮಾಹಿತಿಯಂತೆ ಮೇ.05 ರಂದು ಮಧ್ಯಾಹ್ನ 3 ಗಂಟೆಗೆ ಮಂಗಳೂರು ಕದ್ರಿ ಉದ್ಯಾನವನದ ಬಳಿಯಲ್ಲಿ ಹೋಗಿದ್ದ ಡಪಡಿಸಿಕೊಂಡು ಕೆಎ-05 ಎಂಎಸ್-1049 ಬಿಳಿ ಬಣ್ಣದ ಮಾರುತಿ ಸ್ವಿಫ್ಟ್ ಕಾರಿನಲ್ಲಿ ಮೂರು ಅಸಾಮಿಗಳು ಇದ್ದು, ಚಿಪ್ಪು ಹಂದಿಯ ಚಿಪ್ಪುಗಳನ್ನು ಮಾರಾಟಕ್ಕೆ ಯತ್ನಿಸುತ್ತಿದ್ದವರನ್ನು ಖಚಿತಪಡಿಸಿಕೊಂಡು ತಕ್ಷಣ ದಾಳಿ ಮಾಡಿ ಮೂರು ಜನ ಆರೋಪಿಗಳನ್ನು ಮತ್ತು ಸ್ವತ್ತನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.

ಸದರಿ ಆರೋಪಿಗಳಿಂದ 5,2 ಕಿಲೋ.ಗ್ರಾಂ ತೂಕದ ಚಿಪ್ಪು ಹಂದಿಯ ಚಿಪ್ಪುಗಳು ಹಾಗೂ ಅಂದಾಜು 3 ಲಕ್ಷ ಮೌಲ್ಯದ ಕೆಎ-05 ಎಂಎಸ್-1049 ಬಿಳಿ ಬಣ್ಣದ ಮಾರುತಿ ಸ್ವಿಫ್ಟ್ ಕಾರನ್ನು ಮುಂದಿನ ಕ್ರಮದ ಬಗ್ಗೆ ವಶಪಡಿಸಿಕೊಳ್ಳಲಾಗಿದೆ. ಆರೋಪಿಗಳಾದ ಬೆಂಗಳೂರು ದಕ್ಷಿಣ ಹೆಚ್.ಆರ್ ಜಗದೀಶ ಬಿನ್ ರಾಮಶೆಟ್ಟಿ 50 ವರ್ಷ, ಕನಕಪುರ ಬೆಂಗಳೂರು ದಕ್ಷಿಣ ಜಿಲ್ಲೆ ಸಿದ್ದು ನಾಯಕ ಬಿನ್ ಲೇಣಣ ತೊಳಚನಾಯಕ 38 ವರ್ಷ, ಬನಶಂಕರಿ, 2ನೇ ಹಂತ, ಬೆಂಗಳೂರು ನಗರ ಬಾಬು ಬಿನ್ ಲೇಣಣ ಟಿಪ್ಪು ಸಾಬ್, 48 ವರ್ಷ, ರವರುಗಳನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಮಾನ್ಯ ಪೊಲೀಸ್ ಉಪಮಹಾ ನಿರೀಕ್ಷಕರು, ಸಿಐಡಿ ಅರಣ್ಯ ಘಟಕ ಬೆಂಗಳೂರು, ಮತ್ತು ಮಡಿಕೇರಿ ಸಿಐಡಿ ಅರಣ್ಯ ಘಟಕದ ಪೊಲೀಸ್ ಅಧೀಕ್ಷಕರಾದ ಪವನ್ ನೆಜ್ಜೂರು ಐಪಿಎಸ್ ರವರ ಮಾರ್ಗದರ್ಶನದಲ್ಲಿ ಮಂಗಳೂರು ಸಿಐಡಿ ಪೊಲೀಸ್ ಅರಣ್ಯ ಸಂಚಾರಿ ದಳದ ಪೊಲೀಸ್ ಉಪನಿರೀಕ್ಷಕರಾದ ದಿಲೀಪ್ ಜಿ.ಆರ್. ಹಾಗೂ ಸಿಬ್ಬಂದಿಗಳಾದ ತಾರಾನಾಥ ಎಸ್, ಮತ್ತು ಅಬ್ದುಲ್ ರವೂಫ್ ರವರು ಪಾಲ್ಗೊಂಡಿರುತ್ತಾರೆ. ಅರಣ್ಯ ಕಾಯ್ದೆ ಮತ್ತು ವನ್ಯ ಜೀವಿಗಳ ಸಂರಕ್ಷಣಾ ಕಾಯ್ದೆ ಸಂಬಂದಪಟ್ಟ ಅಕ್ರಮ ಚಟುವಟಿಕೆಗಳು ಕಂಡು ಬಂದಲ್ಲಿ ಮಡಿಕೇರಿ ಸಿಐಡಿ ಅರಣ್ಯ ಘಟಕ ಪೊಲೀಸ್ ಅಧೀಕ್ಷಕರ ಕಚೇರಿ ದೂರವಾಣಿ ಸಂಖ್ಯೆ:9480800220, ಐಡಿ ಪೊಲೀಸ್ ಅರಣ್ಯ ಸಂಚಾರಿ ದಳ, ಸಕಲೇಶಪುರ ಕಚೇರಿ ದೂರವಾಣಿ ಸಂಖ್ಯೆ: 8277949804 ಗಳಿಗೆ ಮಾಹಿತಿಯನ್ನು ನೀಡಬೇಕಾಗಿ ಎಂದು ಸಿ.ಐಡಿ ಪೊಲೀಸ್ ಅರಣ್ಯ ಸಂಚಾರಿ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

8ರಂದು ಪ್ರಗತಿ ಪರಿಶೀಲನಾ ಸಭೆ ಆಯೋಜನೆ

ಹಾಸನ: ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ರಾಮಪ್ಪ ಎಂ ಅವರ ಅಧ್ಯಕ್ಷತೆಯಲ್ಲಿ ಮೇ 8ರಂದು ಬೆಳಗ್ಗೆ 10.30ಕ್ಕೆ ಹಾಸನ ಜಿಲ್ಲಾ ಪಂಚಾಯಿತಿ ಕಚೇರಿ ಹೊಯ್ಸಳ ಸಭಾಂಗಣದಲ್ಲಿ ಪ್ರಗತಿ ಪರಿಶೀ ಲನಾ ಸಭೆಯನ್ನು ಏರ್ಪಡಿಸಲಾಗಿದೆ. ಅಂದು ಮಧ್ಯಾಹ್ನ 3 ಗಂಟೆಗೆ ಬಾಗೂರು ಹೋಬಳಿ, ನವಿಲೆ ಭೋವಿ ಕಾಲೋನಿ ಗ್ರಾಮದಲ್ಲಿ ಫಲಾನುಭವಿಗಳೊಂದಿಗೆ ಸಭೆಯನ್ನು ಏರ್ಪಡಿಸಿದೆ.

ನಾಳೆ ವಿದ್ಯುತ್ ವ್ಯತ್ಯಯ

ಹಾಸನ: ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ ಕೇಂದ್ರ ಹಳ್ಳಿಮೈಸೂರು ತ್ರೈಮಾಸಿಕ ನಿರ್ವಹಣಾ ಕೆಲಸಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ 8ರಂದು ಬೆಳಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಹಳ್ಳಿಮೈಸೂರು ಶಾಖೆಯ ಗ್ರಾಮಗಳಾದ ಹಳ್ಳಿಮೈಸೂರು, ತಾತನಹಳ್ಳಿ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ಕಸಾಪ ಬೆಳೆಯಲು ಮಹಾನ್ ಚೇತನಗಳ ಕೊಡುಗೆಯಿದೆ

ಕಸಾಪ ಸಂಸ್ಥಾಪನಾ ದಿನ, ಬಸವ ಜಯಂತಿಯಲ್ಲಿ ಮದನ ಗೌಡ ಶ್ಲಾಘನೆ | ನಾಡು-ನುಡಿ ಉಳಿವಿಗೆ ಕಸಾಪ ಶ್ರಮ



• **ಕನ್ನಡಪ್ರಭ ವಾರ್ತೆ** ಹಾಸನ

ಎಲ್ಲಾ ಭಾಷೆಗಳಿಗಿಂತ ಕನ್ನಡ ಭಾಷೆ ಅತ್ಯಂತ ಶ್ರೀಮಂತವಾಗಿದ್ದು, ಎಂಟು ಜ್ಞಾನಪೀಠ ಪುರಸ್ಕಾರಗಳನ್ನು ಪಡೆದಿರುವ ಏಕೈಕ ಭಾಷೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅನೇಕ ಮಹಾನ್ ಚೇತನರ ಕೊಡುಗೆಯಿಂದ ಕನ್ನಡ ಸಾಹಿತ್ಯ ಪರಿಷತ್ತು ಇಂದು ಹೆಮ್ಮರವಾಗಿ ಬೆಳೆದಿದೆ ಎಂದು ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎಚ್.ಪಿ.ಮದನ್ ಗೌಡ ಅಭಿಪ್ರಾಯಪಟ್ಟರು.

ನಗರದ ಸ್ಕೌಟ್ಸ್ ಅಂಡ್ ಗೈಡ್ಸ್ ಭವನದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆವತಿಯಿಂದ ಆಯೋಜಿಸಲಾದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಹಾಗೂ ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ 1915ರ ಮೇ 5ರಂದು ಸ್ಥಾಪಿತವಾದ ಕನ್ನಡ ಸಾಹಿತ್ಯ ಪರಿಷತ್ತು ಅಂದಿನಿಂದ ಇಂದಿನವರೆಗೂ ಸಾಹಿತ್ಯ, ನಾಡು-ನುಡಿ, ಸಂಸ್ಕೃತಿ ಹಾಗೂ ಭಾಷಾ ಅಭಿವೃದ್ಧಿಯಲ್ಲಿ ಅಪಾರ ಸೇವೆ ಸಲ್ಲಿಸಿದೆ ಎಂದು ಅವರು ಹೇಳಿದರು. ಪರಿಷತ್ತಿನ ಮೊದಲ ಅಧ್ಯಕ್ಷರಾಗಿ ಎಚ್.ಬಿ. ನಂಜುಂಡಯ್ಯ ಆಯ್ಕೆಯಾಗಿದ್ದರೂ, ಇದರ ಸ್ಥಾಪನೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಅಂದಿನ ದಿವಾನರಾದ ಸರ್ ಎಂ. ವಿಶ್ವೇಶ್ವರಯ್ಯ ಅವರ ಸಹಕಾರ ಅತ್ಯಂತ ಮಹತ್ವದ್ದಾಗಿತ್ತು. ಇಂತಹ ಮಹನೀಯರನ್ನು ಸ್ಮರಿಸುವುದು ನಮ್ಮ ಕರ್ತವ್ಯವೆಂದು ಹೇಳಿದರು. ಬಸವ ಜಯಂತಿಯ ಮಹತ್ವವನ್ನು ಉಲ್ಲೇಖಿಸಿದ ಅವರು, ಬಸವಣ್ಣನವರ ತತ್ವ-ಆದರ್ಶಗಳು ಜಾತಿ, ಮತ, ಪಂಥಗಳನ್ನು ಮೀರಿ ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸುತ್ತವೆ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯ ಎಂದರು.

ಶಿಕ್ಷಕ ಸೋಮಶೇಖರ್ ಮಾತನಾಡಿ, 12ನೇ ಶತಮಾನದಲ್ಲಿ ಬಸವಣ್ಣನವರು ವಚನಗಳ ಮೂಲಕ ಸಮಾಜವನ್ನು ಒಗ್ಗೂಡಿಸಿದ ಮಹಾನ್ ವ್ಯಕ್ತಿ. ಅವರ ತತ್ವಗಳು ಜಗತ್ತಿನಲ್ಲಿ ಅಪರೂಪವಾಗಿದ್ದು, ಧರ್ಮ ಸ್ಥಾಪನೆಗೆ ವಚನಗಳನ್ನು ಮಾಧ್ಯಮವನ್ನಾಗಿ ಬಳಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು. ವಚನಕಾರರ ಸಾಹಿತ್ಯ ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದೆ ಎಂದರು. ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಇಂತಹ ಕಾರ್ಯಕ್ರಮಗಳು ಯುವಪೀಳಿಗೆಗೆ ಪರಿಷತ್ತಿನ ಮಹತ್ವ ಹಾಗೂ ಶರಣರ ತತ್ವಗಳನ್ನು ಪರಿಚಯಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಕೌಟ್ ಅಂಡ್ ಗೈಡ್ಸ್ ಆಯುಕ್ತ ವೀರಭದ್ರಪ್ಪ ಮಾತನಾಡಿ, ಬಸವಣ್ಣನವರು ಜಾತಿ-ಮತ ಭೇದಗಳನ್ನು ದೂರ ಮಾಡಿ ಸಮಾಜವನ್ನು ಒಗ್ಗೂಡಿಸಿದ ಮಹಾನ್ ವ್ಯಕ್ತಿ. ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಅವರ ಆದರ್ಶಗಳು ಹೆಚ್ಚು ಪ್ರಸ್ತುತವಾಗಿವೆ ಎಂದು ಹೇಳಿದರು.

ಕೇಂದ್ರ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಉಪ್ಪಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಬಸವಕೇಂದ್ರದ ಅಧ್ಯಕ್ಷ ಯು.ಎಸ್. ಬಸವರಾಜ್, ನ್ಯಾಯವಾದಿ ಎಂ.ಬಿ. ಗಿರಿಜಾಂಬಿಕ, ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಹಾಸನ ತಾಲ್ಲೂಕು ಅಧ್ಯಕ್ಷೆ ಗೀತಾ, ವೇದಿಕೆಯ ಕೇಂದ್ರ ಕೋಶಾಧ್ಯಕ್ಷ ಎಚ್.ಎಸ್. ಬಸವರಾಜ್, ಕಸಾಪ ಮಾಜಿ ಅಧ್ಯಕ್ಷ ಉದಯ ರವಿ, ಸಾಹಿತಿ ಚಲಂ ಹಾಡ್ಲಹಳ್ಳಿ, ಶಿಕ್ಷಕ ಸೋಮಶೇಖರ್, ಹಿರಿಯ ಗೈಡ್ ಶಿಕ್ಷಕಿ ಎಚ್.ಜಿ. ಕಾಂಚನಮಾಲ, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ.ಪ್ರಿಯಾಂಕ, ಎಲ್.ಟಿ. ಗೈಡ್ ಮಮತ, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಾ.ನಂ. ಲೋಕೇಶ್, ಎ.ವಿ.ಕೆ. ಮಹಿಳಾ ಕಾಲೇಜಿನ ಉಪನ್ಯಾಸಕ ಪ್ರಕಾಶ್, ಬ್ಯಾಂಕ್ ನೌಕರರ ಸಂಘದ ಮಾಜಿ ಅಧ್ಯಕ್ಷ ಪರಮಶಿವಯ್ಯ, ರೇಖಾ ಪ್ರಕಾಶ್, ಮಮತಾ ಪಾಟೀಲ್, ಕವಯಿತ್ರಿ ಎಚ್.ಬಿ. ಚೂಡಾಮಣಿ, ಪದ್ಮಾವತಿ ವೆಂಕಟೇಶ್, ಅಂತರಾಷ್ಟ್ರೀಯ ಚಿತ್ರ ಕಲಾವಿದ ಬಿ.ಎಸ್. ದೇಸಾಯಿ, ಸಾಹಿತಿ ಗೊರೂರು ಅನಂತ ರಾಜು, ಗಣೇಶ್ ಅಂಕಪುರ, ಕವಯಿತ್ರಿ ಎಚ್.ಎಸ್. ಪ್ರತಿಮಾ ಹಾಸನ್, ಮುದ್ರಣಕಾರ ಸಂಘದ ಸಂಸ್ಥಾಪಕ ಅಧ್ಯಕ್ಷ ಬಿ.ಎಂ. ರಾಜಶೇಖರ್, ಸಾಹಿತಿ ಡಾ. ಶಾಂತ ಅತ್ನಿ, ಚೆನ್ನಂಗಿಹಳ್ಳಿ ಶ್ರೀಕಾಂತ್, ಎಚ್. ರಾಮಣ್ಣ ಉಪಸ್ಥಿತರಿದ್ದರು.

